**Bangalore**
**Regional News**
**06.08.2024 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ರಾಜ್ಯಗಳು ಪಡಿತರ ಬೇಡಿಕೆ ಸಲ್ಲಿಸಿದರೆ ಆಹಾರ ಧಾನ್ಯ ಪೂರೈಕೆಗೆ ಕೇಂದ್ರ ಸಿದ್ಧ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೨. ರಾಜ್ಯ ಸರ್ಕಾರವನ್ನು ಕಿತ್ತೊಗೆಯಲು ಯಾರಿಂದಲೂ ಸಾಧ್ಯವಿಲ್ಲ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೩. ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡುವವರೆಗೆ ಹೋರಾಟ - ಬಿಜೆಪಿ ಸ್ಪಷ್ಟನೆ

೪. ಕೊಡಗು ಜಿಲ್ಲೆಯ ಪ್ರವಾಹ ಪೀಡಿತ ಸೂಕ್ಷ್ಮ ಪ್ರದೇಶಗಳಲ್ಲಿ ಅಗತ್ಯ ಕಟ್ಟೆಚ್ಚರ ವಹಿಸುವಂತೆ ಜಿಲ್ಲಾಧಿಕಾರಿ ಸೂಚನೆ

೫. ಪ್ಯಾರಿಸ್ ಒಲಿಂಪಿಕ್ಸ್ : ಕುಸ್ತಿಯಲ್ಲಿ ಸೆಮಿಫೈನಲ್ ಪ್ರವೇಶಿಸಿದ ಭಾರತದ ವಿನೇಶ್ ಫೋಗಟ್, ಜಾವಲಿನ್ ಥ್ರೋನಲ್ಲಿ ಫೈನಲ್ ಪ್ರವೇಶಿಸಿದ ನೀರಜ್ ಚೋಪ್ರಾ

**<><*<><>*><>**

ಪಡಿತರ ವಿತರಣೆ ವ್ಯವಸ್ಥೆಯನ್ನು ಸೂಕ್ತವಾಗಿ ಜಾರಿಗೊಳಿಸುವುದು ರಾಜ್ಯಗಳ ಜವಾಬ್ದಾರಿಯಾಗಿದೆ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಹ್ಲಾದ್ ಜೋಶಿ ರಾಜ್ಯಸಭೆಯಲ್ಲಿ ತಿಳಿಸಿದ್ದಾರೆ. ಕೇಂದ್ರ ಸರ್ಕಾರ ಅಕ್ಕಿ ಮತ್ತು ಗೋಧಿಯನ್ನು ವಿತರಿಸುತ್ತಿದ್ದು, ರಾಜ್ಯಗಳು ಬಯಸಿದರೆ ಸಿರಿಧಾನ್ಯಗಳನ್ನು ಸಹ ವಿತರಿಸಲು ಅವಕಾಶವಿದೆ. ರಾಜ್ಯಗಳು ಈ ಕುರಿತು ಬೇಡಿಕೆ ಸಲ್ಲಿಸಿದರೆ ಪೂರೈಕೆ ಮಾಡಲು ಕೇಂದ್ರ ಸಿದ್ಧವಿದೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಆಹಾರ ಭದ್ರತೆ ಕಾಯ್ದೆಗೆ ಸೂಕ್ತ ನೀತಿ ರೂಪಿಸಿದ್ದು ಕಳೆದ ಜನವರಿಯಲ್ಲಿ ಉಚಿತ ಪಡಿತರ ವಿತರಣೆಯನ್ನು ಮುಂದಿನ ಐದು ವರ್ಷಗಳವರೆಗೆ ವಿಸ್ತರಿಸಿದೆ. ದೇಶದ ಶೇಕಡ ೬೭ರಷ್ಟು ಜನರಿಗೆ ಪಡಿತರ ಲಭ್ಯವಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

**<><*<><>*><>**

ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಯಾರಿಂದಲೂ ಕಿತ್ತೊಗೆಯಲು ಸಾಧ್ಯವಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯಿಸಿದ್ದಾರೆ. ಮಂಡ್ಯ ನಗರದಲ್ಲಿ ನಡೆದ ಜನಾಂದೋಲನ ಸಮಾವೇಶದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ದೇಶದ ಶಕ್ತಿಯಾಗಿದ್ದು, ಬಿಜೆಪಿ ಮತ್ತು ಜೆಡಿಎಸ್ ಕುತಂತ್ರದಿಂದ ಸರ್ಕಾರ ಕೆಡವಲು ಹೊರಟಿದ್ದಾರೆ. ಅವರ ಪಾದಯಾತ್ರೆ, ಅವರು ಮಾಡಿದ ಹಗರಣಗಳ ಪಾಪದ ವಿಮೋಚನೆಯ ಯಾತ್ರೆ ಎಂದು ವ್ಯಾಖ್ಯಾನಿಸಿದ್ದಾರೆ. ಜನವಿರೋಧಿ ಪಾದಯಾತ್ರೆಯ ವಿರುದ್ಧ ಕಾಂಗ್ರೆಸ್ ಜನಾಂದಲೋನ ನಿರಂತರವಾಗಿ ನಡೆಯಲಿದೆ ಎಂದು ಹೇಳಿದರು. ಸಮಾವೇಶದಲ್ಲಿ ೧೨ ಸಚಿವರು ಹಾಗೂ ರಾಜ್ಯ ಕಾಂಗ್ರೆಸ್‌ನ ಪ್ರಮುಖ ಮುಖಂಡರು ಭಾಗವಹಿಸಿದ್ದರು.

<><*<><>*><>

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮತ್ತು ಬುಡಕಟ್ಟು ಕಲ್ಯಾಣ ಮಂಡಳಿ ಪ್ರಕರಣಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮೊದಲ ಆರೋಪಿಯಾಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಮೈಸೂರು ಚಲೋ ಪಾದಯಾತ್ರೆಯ ೪ನೇ ದಿನವಾದ ಇಂದು ಮದ್ದೂರಿನಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವವರಿಗೆ ಹೋರಾಟ ಮುಂದುವರೆಯಲಿದೆ ಎಂದು ಘೋಷಿಸಿದ್ದಾರೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಪ್ರಕರಣದಲ್ಲಿ ಎಸ್‌ಐಟಿ ಚಾರ್ಜ್‌ಶೀಟ್ ಸಲ್ಲಿಸಿದೆ. ಆದರೆ ಮಾಜಿ ಸಚಿವ ಬಿ. ನಾಗೇಂದ್ರ ಮತ್ತು ಶಾಸಕ ಬಸನಗೌಡ ದದ್ದಲ್ ಹೆಸರನ್ನು ಚಾರ್ಜ್‌ಶೀಟ್‌ನಿಂದ ಕೈಬಿಡಲಾಗಿದೆ ಎಂದು ಆರೋಪಿಸಿದ್ದಾರೆ. ಅಧಿಕಾರ ದಾಹದಿಂದ ಪಾದಯಾತ್ರೆ ಹಮ್ಮಿಕೊಂಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರ ಕಚೇರಿಯಲ್ಲಿ ಮತ್ತೊಂದು ದೂರು ದಾಖಲಾಗಿದೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಭೂಪ್ರಕರಣದ ಡಿ-ನೋಟಿಫಿಕೇಷನ್ ಸಂಬಂಧಿಸಿದಂತೆ ಆರ್‌ಟಿಐ ಕಾರ್ಯಕರ್ತರೊಬ್ಬರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಅಂಚೆ ಮೂಲಕ ದೂರು ದಾಖಲಿಸಿದ್ದಾರೆ. ಸಿದ್ದರಾಮಯ್ಯ ಅವರು, ೨೦೦೮ರಲ್ಲಿ ಶಾಸಕರಾಗಿದ್ದಾಗ ೧೯೭೯ರಲ್ಲಿ ಸರ್ಕಾರ ಸ್ವಾಧೀನ ಪಡಿಸಿಕೊಂಡ ಭೂಮಿಯನ್ನು ಡಿ-ನೋಟಿಫಿಕೇಷನ್ ಮಾಡುವಂತೆ ಜಿಲ್ಲಾಧಿಕಾರಿಗೆ ಪತ್ರ ಬರೆದಿದ್ದರು. ೨೧ ವರ್ಷಗಳ ಬಳಿಕ ಜಿಲ್ಲಾಡಳಿತ ಡಿ-ನೋಟಿಫಿಕೇಷನ್ ಪ್ರಕ್ರಿಯೆಯನ್ನು ಆರಂಭಿಸಿದ್ದು, ಅಕ್ರಮವಾಗಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ಮೈಸೂರು ನಗರದ ಉತ್ತನಹಳ್ಳಿ ಗ್ರಾಮದ ಸರ್ವೇ

ನಂಬರ್ ೨೦೫/೨ ರ ಒಟ್ಟು ೧.೩೯ ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ಆಶ್ರಯ ನಿವೇಶನಗಳಾಗಿ ವಿತರಿಸಲಾಗಿದೆ ಎಂದು ಆರೋಪಿಸಿದ್ದಾರೆ.

<><*<><>*><>

ನಗರ ಪ್ರದೇಶದಲ್ಲಿ ವಾಹನಗಳಿಂದ ಹೊರಹೊಮ್ಮುವ ಇಂಗಾಲದಿಂದ ಆಗುವ ದುಷ್ಪರಿಣಾಮ ತಗ್ಗಿಸುವಲ್ಲಿ ಬಿದಿರು ಮಹತ್ವದ ಪಾತ್ರ ವಹಿಸುತ್ತದೆ ಎಂದು ಅರಣ್ಯ ಜೀವಿ ಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ. ಖಂಡ್ರೆ ಅಭಿಪ್ರಾಯ ಪಟ್ಟಿದ್ದಾರೆ. ಬೆಂಗಳೂರಿನಲ್ಲಿ ೩೦ ಸಾವಿರ ಬಿದಿರು ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಬಿದಿರು ಹಿಂದಿನಿಂದಲೂ ಮನುಷ್ಯನ ಬದುಕಿನ ಒಂದು ಭಾಗವಾಗಿದೆ. ನಮ್ಮ ಪೂರ್ವಜರು ಮಗುವನ್ನು ಬಿದಿರಿನ ತೊಟ್ಟಿಲಲ್ಲಿ ಹಾಕಿ ತೂಗುತ್ತಿದ್ದರು. ಬಿದಿರಿಗೂ ನಮ್ಮ ಸಂಸ್ಕೃತಿಗೂ ಅವಿನಾಭವ ಸಂಬಂಧವಿದೆ ಎಂದು ಹೇಳಿದರು.

<><*<><>*><>

ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ದ್ರಾಕ್ಷಿ ಕೃಷಿಯನ್ನು ಪ್ರೋತ್ಸಾಹಿಸಲು ಬೆಳೆಗಾರರಿಗೆ ಹನಿ ನೀರಾವರಿಗಾಗಿ ಸಹಾಯಧನ ನೀಡಲಾಗಿದೆ. ಸಾಮಾನ್ಯ ವರ್ಗಕ್ಕೆ ಶೇಕಡ ೭೫ ಹಾಗೂ ಪರಿಶಿಷ್ಟ ವರ್ಗಕ್ಕೆ ಶೇಕಡ ೯೦ ರಷ್ಟು ಸಹಾಯ ಧನ ನೀಡಲಾಗುತ್ತಿದೆ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಮಾಹಿತಿ ನೀಡಿದೆ. ಸಂಸದ ಡಾ. ಕೆ. ಸುಧಾಕರ್ ಅವರು, ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಡಿ ದ್ರಾಕ್ಷಿ ಬೆಳೆಗಾರರ ಸಂಕಷ್ಟಗಳನ್ನು ಸರ್ಕಾರದ ಗಮನಕ್ಕೆ ತಂದು ಸದನದಲ್ಲಿ ಪ್ರಶ್ನೆ ಕೇಳಿದ್ದು, ಈ ಕುರಿತು ಕೇಂದ್ರ ಸರ್ಕಾರ ಲಿಖಿತ ಉತ್ತರ ನೀಡಿದೆ. ೨೦೨೨-೨೩ ಸಾಲಿನಲ್ಲಿ ಚಿಕ್ಕಬಳ್ಳಾಪುರದಲ್ಲಿ ೫೬೮ ಹೆಕ್ಟೇರ್‌ನಲ್ಲಿ ದ್ರಾಕ್ಷಿ ಬೆಳೆದಿದ್ದು, ೧೩ ಸಾವಿರದ ೧೧೩ ಟನ್ ದ್ರಾಕ್ಷಿ ಉತ್ಪಾದನೆಯಾಗಿದೆ. ಬೆಂಗಳೂರು ಗ್ರಾಮಾಂತರದಲ್ಲಿ ೧ ಸಾವಿರದ ೭೧೨ ಹೆಕ್ಟೇರ್‌ನಲ್ಲಿ ೪೩ ಸಾವಿರದ ೮೬ ಟನ್ ದ್ರಾಕ್ಷಿ ಉತ್ಪಾದನೆಯಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಕರ್ನಾಟಕ ಎಲೆಕ್ಟ್ರಾನಿಕ್ ಸಿಸ್ಟಮ್ಸ್ ಡಿಸೈನ್ ಮತ್ತು ತಯಾರಿಕೆ ವಲಯದಲ್ಲಿ ಕರ್ನಾಟಕ ಜಾಗತಿಕ ನೈಋತ್ಯ ವಹಿಸುವ ಗುರಿ ಹೊಂದಿದೆ ಎಂದು ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಮೈಸೂರಿನಲ್ಲಿ ಸೆಮಿಕಂಡಕ್ಟರ್ ಎಲಿಮೆಂಟ್ ಮ್ಯಾನೇಜ್‌ಮೆಂಟ್ ಸಿಸ್ಟಮ್ ಮತ್ತು ಘಟಕ ಗೋದಾಮುಗಳು ಸೇರಿದಂತೆ ೨೦ಕ್ಕೂ ಹೆಚ್ಚು ಕಂಪನಿಗಳಿಂದ ಸುಮಾರು ೬೦೦ ಕೋಟಿ ರೂಪಾಯಿಗಳ ಹೊಸ ಹೂಡಿಕೆ ಹರಿದು ಬಂದಿದೆ ಎಂದು ತಿಳಿಸಿದ್ದಾರೆ. ಇದು ೫ ಸಾವಿರ ಹೊಸ ಉದ್ಯೋಗವಕಾಶ ಕಲ್ಪಿಸಲಿದ್ದು, ಮಹಿಳಾ ಉದ್ಯೋಗಿಗಳ ಸಬಲೀಕರಣಕ್ಕೂ ಸಹಾಯಕವಾಗಲಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

<><*<><>*><>

ಕೊಡಗು ಜಿಲ್ಲೆಯಲ್ಲಿ ಕಳೆದ ಮೂರು ದಿನಗಳಿಂದ ಮಳೆ ಕಡಿಮೆಯಾಗಿದ್ದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಬಾರದು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ನಿರ್ದೇಶನ ನೀಡಿದ್ದಾರೆ. ಮುಂದಿನ ಮೂರು-ನಾಲ್ಕು ದಿನಗಳ ನಂತರ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ ಎಂಬ ಹವಾಮಾನ ಇಲಾಖೆ ಮುನ್ಸೂಚನೆ ಹಿನ್ನಲೆಯಲ್ಲಿ ಭೂಕುಸಿತ ಹಾಗೂ ಪ್ರವಾಹ ಪೀಡಿತ ಸೂಕ್ಷ ಪ್ರದೇಶಗಳಲ್ಲಿ ಅಗತ್ಯ ಕಟ್ಟೆಚ್ಚರ ವಹಿಸುವಂತೆ  ಸೂಚಿಸಿದ್ದಾರೆ. ವಿಡಿಯೋ ಸಂವಾದ ಮೂಲಕ ಅಧಿಕಾರಿಗಳ ಜೊತೆ ಸಭೆ ನಡೆಸಿದ ಅವರು ಮುಂದಿನ ೧೦ ರಿಂದ ೧೫ ದಿನಗಳ ಕಾಲ ಸಾಕಷ್ಟು ಎಚ್ಚರವಹಿಸಬೇಕಿದೆ ಎದು ತಿಳಿಸಿದ್ದಾರೆ.  ಕೊಡಗಿನ ಬಳಿ ಕೇರಳ ವಯನಾಡು ಜಿಲ್ಲೆಯಲ್ಲಿ ಸಂಭವಿಸಿದ ಪ್ರಾಕೃತಿಕ ವಿಕೋಪದ ದುರಂತ ಎಲ್ಲಿಯೂ ಮರುಕಳುಹಿಸಬಾರದು. ಜನ ಜಾನುವಾರುಗಳ ರಕ್ಷಣೆ ಅತೀ ಮುಖ್ಯವಾಗಿದೆ. ಆ ನಿಟ್ಟಿನಲ್ಲಿ ಯಾವುದೇ ರೀತಿಯ ಪ್ರಾಣ ಹಾನಿ ಉಂಟಾಗದಂತೆ ಮುನ್ನೆಚ್ಚರವಹಿಸುವುದು ಅತ್ಯಗತ್ಯವಾಗಿದೆ ಎಂದು ಹೇಳಿದ್ದಾರೆ.

<><*<><>*><>

ಆಗಸ್ಟ್ ತಿಂಗಳಿನಲ್ಲಿ ನಿರಂತರ ರಜೆ ಇರುವ ಹಿನ್ನೆಲೆಯಲ್ಲಿ ಪ್ರಯಾಣಿಕರ ಬೇಡಿಕೆಯನ್ನು ನಿರ್ವಹಿಸಲು ನೈಋತ್ಯ ರೈಲ್ವೆಯು ವಿಶೇಷ ರೈಲುಗಳನ್ನು ಓಡಿಸಲಿದೆ. ಹುಬ್ಬಳ್ಳಿ-ಯಶವಂತಪುರ ಸೂಪರ್ ಫಾಸ್ಟ್ ಎಕ್ಸ್‌ಪ್ರೆಸ್, ಯಶವಂತಪುರ-ಬೆಳಗಾವಿ ಸೂಪರ್ ಫಾಸ್ಟ್ ವಿಶೇಷ ಎಕ್ಸ್‌ಪ್ರೆಸ್, ಯಶವಂತಪುರ-ಬೆಳಗಾವಿ ಸೂಪರ್ ಫಾಸ್ಟ್ ವಿಶೇಷ ಎಕ್ಸ್‌ಪ್ರೆಸ್, ಎಸ್‌ಎಂವಿಟಿ-ಬೆಂಗಳೂರು, ಎಸ್‌ಎಸ್-ಹುಬ್ಬಳ್ಳಿ ಏಕಮುಖ ಎಕ್ಸ್‌ಪ್ರೆಸ್, ವಿಜಯಪುರ-ಎಸ್‌ಎಂವಿಟಿ-ಬೆಂಗಳೂರು ಏಕಮುಖ ಎಕ್ಸ್‌ಪ್ರೆಸ್, ಎಸ್‌ಎಂವಿಟಿ-ಬೆಂಗಳೂರು-ವಿಜಯಪುರ ಎಕ್ಸ್‌ಪ್ರೆಸ್ ರೈಲುಗಳನ್ನು ಓಡಿಸಲಿದೆ. ಇದೇ

೧೩ ರಿಂದ ೧೮ರವರೆಗೆ ವಿಶೇಷ ರೈಲುಗಳು ಪ್ರಯಾಣ ಬೆಳಸಲಿವೆ. ಪ್ರಯಾಣಿಕರು ಹೆಚ್ಚಿನ ಮಾಹಿತಿಗಾಗಿ ಭಾರತೀಯ ರೈಲ್ವೆ ಜಾಲತಾಣಕ್ಕೆ ಭೇಟಿ ನೀಡಬಹುದು.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್‌ನ ಪ್ರೀ ಕ್ವಾರ್ಟರ್‌ಫೈನಲ್‌ನಲ್ಲಿಂದು ಭಾರತದ ಕುಸ್ತಿಪಟು ವಿನೇಶ್ ಫೋಗಟ್ ಮಹಿಳೆಯರ ೫೦ ಕೆ.ಜಿ ಫ್ರೀಸ್ಟೈಲ್‌ನಲ್ಲಿ ಗೆಲುವು ಸಾಧಿಸಿದ್ದಾರೆ. ನಾಲ್ಕು ಬಾರಿಯ ವಿಶ್ವ ಚಾಂಪಿಯನ್ ಜಪಾನ್‌ನ ಯುಯಿ ಸುಸಾಕಿ ವಿರುದ್ಧ ೩-೨ ಅಂತರದಿಂದ ಗೆಲುವು ಸಾಧಿಸಿ ಸೆಮಿಫೈನಲ್ ತಲುಪಿದ್ದಾರೆ. ಜಾವಲಿನ್ ಥ್ರೊ ಅರ್ಹತಾ ಪಂದ್ಯದಲ್ಲಿ ಭಾರತದ ನೀರಜ್ ಚೋಪ್ರಾ ೮೯.೩೪ ಮೀಟರ್ ಎಸೆತದೊಂದಿಗೆ ಫೈನಲ್ ತಲುಪಿದ್ದು, ಚಿನ್ನದ ಪದಕದ ಮೇಲೆ ಕಣ್ಣಿಟ್ಟಿದ್ದಾರೆ. ಭಾರತದ ಇನ್ನೊಬ್ಬ ಜಾವಲಿನ್ ಎಸೆತಗಾರ ಕಿಶೋರ್ ಕುಮಾರ್ ಜೆನ ಫೈನಲ್ ತಲುಪುವಲ್ಲಿ ವಿಫಲರಾಗಿದ್ದಾರೆ. ಹಾಕಿ ಸೆಮಿಫೈನಲ್ ಪಂದ್ಯದಲ್ಲಿಂದು ಭಾರತ ಪುರುಷರ ತಂಡ ಜರ್ಮನಿಯನ್ನು ಎದುರಿಸಲಿದ್ದು, ಫೈನಲ್‌ನಲ್ಲಿ ಸ್ಥಾನ ಪಡೆಯಲು ಸೆಣಸಾಟ ನಡೆಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦:೩೦ ಕ್ಕೆ ಆರಂಭವಾಗಲಿದೆ. ಮಹಿಳೆಯರ ೪೦೦ ಮೀಟರ್ ಓಟದ ರಿಪಿಚೇಜ್ ಸುತ್ತಿನಲ್ಲಿ, ಭಾರತದ ಕಿರಣ್ ಪಹಲ್, ಸೆಮಿಫೈನಲ್ ಪ್ರವೇಶಿಸಲು ವಿಫಲರಾಗಿದ್ದಾರೆ. ರಿಪಿಚೇಜ್ ಹೀಟ್-೧ ರಲ್ಲಿ ೬ನೇ ಸ್ಥಾನ ಗಳಿಸಿದ್ದಾರೆ. ಟೇಬಲ್ ಟೆನಿಸ್‌ನಲ್ಲಿ ಹರ್ಮೀತ್ ದೇಸಾಯಿ, ಮಾನವ್ ಠಕ್ಕರ್ ಮತ್ತು ಅಚಂತಾ ಶರತ್ ಕಮಲ್ ಅವರನ್ನೊಳಗೊಂಡ ಭಾರತೀಯ ಪುರುಷರ ತಂಡ, ಚೀನಾ ವಿರುದ್ಧ ೧೬ನೇ ಸುತ್ತಿನಲ್ಲಿ ೦-೩ ಅಂತರದಿಂದ ಸೋಲು ಅನುಭವಿಸಿದ್ದಾರೆ.

<><*<><>*><>

<u>ಕೇಳುಗರ ಗಮನಕ್ಕೆ...</u>

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಒಲಿಂಪಿಕ್ಸ್ ಕ್ರೀಡಾಕೂಟದ ಪ್ರಸಾರದ ಹಿನ್ನೆಲೆಯಲ್ಲಿ ಬೆಳಗ್ಗೆ ೭-೩೫ಕ್ಕೆ ಪ್ರಸಾರವಾಗುತ್ತಿದ್ದ ರಾಷ್ಟ್ರೀಯ ವಾರ್ತೆಗಳು ಇದೇ ತಿಂಗಳ ೧೧ರವರೆಗೆ ಬೆಳಗ್ಗೆ ೯ ಗಂಟೆ ೫ ನಿಮಿಷಕ್ಕೆ ಪ್ರಸಾರವಾಗಲಿದೆ.

<><*<><>*><>

## <u>ಸಂಕ್ಷಿಪ್ತ ಸುದ್ದಿಗಳು</u>

೧. ಬೆಂಗಳೂರು ನಗರ ಜಿಲ್ಲೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ “ಕರ್ನಾಟಕ ಸಂಭ್ರಮ-೫೦” “ಹೆಸರಾಯಿತು ಕರ್ನಾಟಕ-ಉಸಿರಾಯಿತು ಕನ್ನಡ" ಅಭಿಯಾನದ ಅಂಗವಾಗಿ ಕನ್ನಡ ಜ್ಯೋತಿ ರಥಯಾತ್ರೆ ನಾಡಿದ್ದು, ಬೆಂಗಳೂರು ನಗರ ಜಿಲ್ಲೆಗೆ ಆಗಮಿಸಲಿದೆ. ಇದಕ್ಕಾಗಿ ಸೂಕ್ತ ವ್ಯವಸ್ಥೆ ಮಾಡಿಕೊಳ್ಳುವಂತೆ ನಗರ ಜಿಲ್ಲಾಧಿಕಾರಿ ಕೆ.ಎ.ದಯಾನಂದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

೨. ೨೦೨೫ರ ಜನವರಿ ೧೦ರಿಂದ ೧೨ರವರೆಗೆ ಮಂಗಳೂರಿನಲ್ಲಿ ‘ಸೌತ್ ಏಶಿಯಾ ಮಾಸ್ಟರ್ಸ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ಆಯೋಜಿಸಲಾಗಿದೆ ಎಂದು ಅಸೋಸಿಯೇಶನ್‌ನ ಪ್ರಧಾನ ಕಾರ್ಯದರ್ಶಿ ಉದಯ ಕುಮಾರ್ ಶೆಟ್ಟಿ ತಿಳಿಸಿದ್ದಾರೆ.

೩. ಮಗುವಿನ ಆರೋಗ್ಯದ ದೃಷ್ಟಿಯಿಂದ ತಾಯಿಯ ಎದೆ ಹಾಲು ಅಮೃತವಿದ್ದಂತೆ, ಹೀಗಾಗಿ ಪ್ರತಿಯೊಬ್ಬ ತಾಯಂದಿರು ಮಗುವಿಗೆ ಎದೆ ಹಾಲನ್ನು ಕಡ್ಡಾಯವಾಗಿ ಕುಡಿಸಬೇಕೆಂದು ಕೋಲಾರ ಮೆಡಿಕಲ್ ಕಾಲೇಜಿನ ವೈದ್ಯ ಡಾ. ನರೇಂದ್ರ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>